# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ. ನಾಗರಾಜು ರವರು, ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಹೇಳಿಕೆ.**

**ಸೂಚನೆ:** ಗೊಲ್ಲರಹಟ್ಟಿಗಳಲ್ಲಿ ವಾಸಿಸುತ್ತಿರುವ **ಕಾಡುಗೊಲ್ಲರು-ಅಡವಿಗೊಲ್ಲರು-ಹಟ್ಟಿಗೊಲ್ಲರು** ಸಾಮಾಜಿಕವಾಗಿ-ಶೈಕ್ಷಣಿಕವಾಗಿ-ಆರ್ಥಿಕವಾಗಿ/ರಾಜಕೀಯವಾಗಿ ಅತೀ ಹಿಂದುಳಿದ ವರ್ಗಗಳಿಗೆ ಸೇರಿರುವ ಸಮುದಾಯದವರಾಗಿರುತ್ತಾರೆ. ಈ ಗೊಲ್ಲರಹಟ್ಟಿಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಜನರು ಪರದಾಡುವಂತಾಗಿರುವುದರಿಂದ ಗೊಲ್ಲರಹಟ್ಟಿಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಮತ್ತು ಕಾಡುಗೊಲ್ಲ ಸಮುದಾಯವು ರಾಜಕೀಯವಾಗಿ ಹಿಂದುಳಿದ ಬುಡಕಟ್ಟು ಜನಾಂಗವಾಗಿದ್ದು, ಕಾಡುಗೊಲ್ಲರಿಗೆ ಪ್ರತ್ಯೇಕ ಜಾತಿ ಪ್ರಮಾಣ ಪತ್ರವನ್ನು ನೀಡಿದ್ದರೂ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಡುಗೊಲ್ಲ ಸಮುದಾಯದ ಅಭ್ಯರ್ಥಿಗಳು ಸ್ಪರ್ಧಿಸಲು ಮೀಸಲಾತಿಯಿಂದ ವಂಚಿತರಾಗಿರುತ್ತಾರೆ. ಆದ್ದರಿಂದ ಕಾಡುಗೊಲ್ಲ ಸಮುದಾಯದ ಅಭ್ಯರ್ಥಿಗಳಿಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳು ಸ್ಪರ್ಧಿಸುವ ಪಟ್ಟಿಯಲ್ಲಿ ರಾಜಕೀಯ ಮೀಸಲಾತಿ ನೀಡುವ ಕುರಿತು ಚರ್ಚಿಸಲು ನಿಯಮ – 72 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ರಾಜ್ಯದಲ್ಲಿರುವ ಗೊಲ್ಲರಹಟ್ಟಿ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಗೊಲ್ಲರ ಹಟ್ಟಿ ಗ್ರಾಮಗಳಿಗಾಗಿಯೇ ಪ್ರತ್ಯೇಕ ಯೋಜನೆಗಳು ಇರುವುದಿಲ್ಲ. ಗ್ರಾಮ ಪಂಚಾಯತಿಗಳು ಕೇಂದ್ರ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಲಭ್ಯವಾಗುವ ಅನುದಾನಕ್ಕೆ ತಕ್ಕಂತೆ ಗ್ರಾಮ ಸಭೆಗಳಲ್ಲಿ ಗುರುತಿಸುವಂತಹ ಮೂಲಭೂತ ಸೌಕರ್ಯಗಳನ್ನು ಸೃಜಿಸುವ ಕಾಮಗಾರಿಗಳನ್ನು ಕೈಗೊಂಡು ಕ್ರಮವಹಿಸಲಾಗುತ್ತಿದೆ ಹಾಗೂ ಕೇಂದ್ರ ಜಲ ಜೀವನ್ ಮಿಷನ್ (Jal Jeevan Mission) ಯೋಜನೆಯಡಿ ಎಲ್ಲಾ ಗ್ರಾಮಗಳಿಗೂ ಸುಸ್ಥಿರ ನೀರಿನ ಸಂಪನ್ಮೂಲವನ್ನು ಒದಗಿಸಲು ಆದ್ಯತೆಯ ಮೇರೆಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗುತ್ತಿದೆ.

ಕಾಡುಗೊಲ್ಲ ಸಮುದಾಯದ ಜನರಿಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಅನುವಾಗುವಂತೆ ಹಿಂದುಳಿದ **ಪ್ರವರ್ಗ–ಎ** ರಡಿ ಸೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

**ಕಡತ ಸಂಖ್ಯೆ:** ಗ್ರಾಅಪಂರಾ 221 ಜಿಪಸ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು